**All India Radio: Bangalore**
**Regional Bulletin In Kannada**
**20.09.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**20.09.2025 / 6.40 p.m.**
**<><><><>**

ಮುಖ್ಯಾಂಶಗಳು :

1. ಬೆಂಬಲ ಬೆಲೆಯಲ್ಲಿ ರಾಜ್ಯದಿಂದ ಪಂಚ ಧಾನ್ಯಗಳ ಖರೀದಿಗೆ ಕೇಂದ್ರ ಸರ್ಕಾರ ಅನುಮತಿ - ಕೇಂದ್ರ ಸಚಿವ ಪ್ರಲ್ಹಾದ್ ಜೋಷಿ ಸ್ಪಷ್ಟನೆ
2. ಸಾಮಾಜಿಕ, ಆರ್ಥಿಕ ಸಮೀಕ್ಷೆಗೆ ಸಾರ್ವಜನಿಕರು ಸಹಕಾರ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ
3. ಜಾತಿ ಗಣತಿ ಮುಂದೂಡಿ, ಇಲ್ಲವೇ ೧೫ ದಿನ ಕಾಲಮಿತಿ ಹೆಚ್ಚಿಸುವಂತೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆಗ್ರಹ
4. ಪುಂಡಾನೆ ಹಿಡಿಯಲು ಸಹಕರಿಸುವಂತೆ ರಾಜ್ಯಕ್ಕೆ ಗೋವಾ ಮನವಿ - ಸಹಕಾರದ ಭರವಸೆ ನೀಡಿದ ಸಚಿವ ಈಶ್ವರ್ ಖಂಡ್ರೆ
5. ಸರ್ಕಾರದ ಸಂಗೀತ ವಿದ್ವಾನ್ ಪ್ರಶಸ್ತಿಗೆ ಪಂಡಿತ್ ಕೆ. ವೆಂಕಟೇಶ್ ಕುಮಾರ್ ಆಯ್ಕೆ

<><><><>

೨೦೨೫-೨೬ ನೇ ಸಾಲಿನಲ್ಲಿ ಕರ್ನಾಟಕದಿಂದ ೩೮ ಸಾವಿರ ಮೆಟ್ರಿಕ್ ಟನ್ ಹೆಸರು ಕಾಳು, ೬೦ ಸಾವಿರ ೮೧೦ ಮೆಟ್ರಿಕ್ ಟನ್ ಉದ್ದು, ೧೫ ಸಾವಿರ ೬೫೦ ಮೆಟ್ರಿಕ್ ಟನ್ ಸೂರ್ಯಕಾಂತಿ, ೬೧ ಸಾವಿರ ೧೪೮ ಮೆಟ್ರಿಕ್ ಟನ್ ಕಡಲೆಬೀಜ ಮತ್ತು ೧ ಲಕ್ಷದ ೧೫, ಸಾವಿರ ಸೋಯಾಬಿನ್ ಬೆಳೆಯನ್ನು ಖರೀದಿಸಲು ಕೇಂದ್ರ ಸರ್ಕಾರದ ಕೃಷಿ ಇಲಾಖೆ ಅನುಮತಿ ನೀಡಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದ್ದಾರೆ. ಧಾರವಾಡದಲ್ಲಿ ಮಾತನಾಡಿರುವ ಅವರು ಬೆಂಬಲ ಬೆಲೆ ಯೋಜನೆಯಡಿ ಕೇಂದ್ರ ಕೃಷಿ ಸಚಿವಾಲಯಕ್ಕೆ ಖರೀದಿಗೆ ಅನುಮತಿ ನೀಡುವಂತೆ ಮನವಿ ಮಾಡಲಾಗಿತ್ತು. ರಾಜ್ಯ ಸರ್ಕಾರ ಕೂಡಲೇ ಜಿಲ್ಲಾವಾರು ಖರೀದಿ ಕೇಂದ್ರಗಳನ್ನು ಸ್ಥಾಪಿಸಲಿ ಎಂದಿದ್ದಾರೆ.

<><><><>

ಇದೇ ೨೨ ರಿಂದ ರಾಜ್ಯದಲ್ಲಿ ಪ್ರಾರಂಭವಾಗುವ ಸಮೀಕ್ಷೆ ಜಾತಿ ಜನಗಣತಿ ಅಥವಾ ಜಾತಿ ಸಮೀಕ್ಷೆ ಅಲ್ಲ. ಇದು ರಾಜ್ಯದ ಜನತೆಯ ಸಾಮಾಜಿಕ, ಆರ್ಥಿಕ ಸಮೀಕ್ಷೆಯಾಗಿದೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ತಿಳಿಸಿದ್ದಾರೆ. ಗದಗದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಸಾರ್ವಜನಿಕರು ಈ ಸಮೀಕ್ಷೆಯ ಕಾರ್ಯಕ್ಕೆ ಸಹಕಾರ ನೀಡಬೇಕೆಂದು ಮನವಿ ಮಾಡಿದ್ದಾರೆ. ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆಯಿಂದ ರಾಜ್ಯದಲ್ಲಿ ಅವಕಾಶ

ವಂಚಿತರಿಗಾಗಿ ಯೋಜನೆ ರೂಪಿಸಲು ಸುಲಭವಾಗಲಿದೆ ಎಂದ ಅವರು  ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆಗೆ ಮಂತ್ರಿ ಮಂಡಳದಲ್ಲಿ ಯಾವುದೇ ವಿರೋಧವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಮುಖ್ಯಮಂತ್ರಿ ಸಿದ್ಧರಾಮಯ್ಯ (೩೪ ಸೆಕೆಂಡ್‌ಗಳು)

<><><><>

೬೦ ದಿನ ಜಾತಿಗಣತಿ ಮುಂದೂಡಿ, ೧೫ ದಿನ ಕಾಲಮಿತಿಯನ್ನು ಹೆಚ್ಚು ಮಾಡಿ ಎಂದು ಸರ್ಕಾರವನ್ನು ಒತ್ತಾಯಿಸಬೇಕು ಎಂದು ಬೆಂಗಳೂರಿನಲ್ಲಿ ನಡೆದ ಒಕ್ಕಲಿಗ ಸಮುದಾಯದ ಸಭೆ ನಿರ್ಣಯ ಮಾಡಿದೆ. ಬಳಿಕ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಜಾತಿ ಜನಗಣತಿ ಸಮೀಕ್ಷೆಯನ್ನು ೧೫ ದಿನಗಳಲ್ಲಿ ಪೂರ್ಣಗೊಳಿಸಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ.  ಸಾಮಾಜಿಕ-ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ನಡೆಸಲು ನಿಗದಿಪಡಿಸಿದ ೧೫ ದಿನಗಳ ಕಾಲಾವಕಾಶವನ್ನು ವಿಸ್ತರಿಸುವಂತೆ ಮನವಿ ಮಾಡಿದ್ದಾರೆ. ಈ ನಡುವೆ ಬೆಂಗಳೂರಿನಲ್ಲಿಂದು ಸುದ್ದಿಗಾರೊಂದಿಗೆ ಮಾತನಾಡಿದ ಬಿಜೆಪಿ ರಾಷ್ಟ್ರೀಯ ವಕ್ತಾರ ಶಹಜಾದ್ ಪೂನಾವಾಲ  ಇದೇ ೨೨ರಂದು ದೇಶವು ಸರಳೀಕೃತ ಜಿಎಸ್‌ಟಿ ವ್ಯವಸ್ಥೆ  ಹೊಂದಲಿದೆ ಎಂದು ತಿಳಿಸಿದ್ದಾರೆ.  ರಾಜ್ಯ ಅತೀ ಹೆಚ್ಚು ತೆರಿಗೆ ಪಾವತಿಸುತ್ತಿದ್ದರೂ  ರಸ್ತೆ ಗುಂಡಿಗಳು, ಮೂಲಸೌಕರ್ಯದ ಕೊರತೆ ಜನರನ್ನು ಬಾಧಿಸುವಂತಾಗಿದೆ,  ರಾಜ್ಯ ಸರ್ಕಾರ ಗ್ಯಾರಂಟಿಗಳನ್ನು ಸರಿಯಾಗಿ ಅನುಷ್ಠಾನಕ್ಕೆ ತರುತ್ತಿಲ್ಲ ಎಂದರು.

<><><><>

ಶೋಷಿತ ಜಾತಿ-ಸಮುದಾಯಗಳು ಜಾತಿ ಸಂಘಟನೆ ಮೂಲಕ  ಹಕ್ಕುಗಳನ್ನು ಪಡೆದುಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ತಿಳಿಸಿದ್ದಾರೆ. ಗದಗದಲ್ಲಿಂದು  ಕುರುಬರ ಸಂಘದ ರಜತ ಮಹೋತ್ಸವ ಮತ್ತು ರಾಜ್ಯ ಮಟ್ಟದ ಕನಕೋತ್ಸವ ಉದ್ಘಾಟಿಸಿ ಮಾತನಾಡಿದ ಅವರು ಹಿಂದುಳಿದವರ ಮನೆಯ ಮಕ್ಕಳು ಶೈಕ್ಷಣಿಕವಾಗಿ, ಆರ್ಥಿಕವಾಗಿ ಮುಂದೆ ಬರುವುದನ್ನು ಕೆಲವರು ಸಹಿಸುವುದಿಲ್ಲ ಎಂದು ಹೇಳಿದ್ದಾರೆ. ಜಾತಿ ವ್ಯವಸ್ಥೆಯಲ್ಲಿ ಜಾತಿ ಇರುವವರೆಗೂ ಸಮಾನತೆ ಬರುವುದಿಲ್ಲ. ಇದಕ್ಕೆ ಶಿಕ್ಷಣ ಮತ್ತು ಸಂಘಟನೆಯೇ ಪರಿಹಾರ ಎಂದು ಹೇಳಿದ್ದಾರೆ.

<><><><>

ಉತ್ತರ ಕರ್ನಾಟಕದ ಜನರ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು  ಕಳಸಾ ಬಂಡೂರಿ ಯೋಜನೆಗೆ ಸಹಕರಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ ಗೋವಾ ಅರಣ್ಯ ಸಚಿವ ವಿಶ್ವಜಿತ್ ರಾಣೆ ಅವರಿಗೆ ಮನವಿ ಮಾಡಿದ್ದಾರೆ. ವಿಕಾಸಸೌಧದಲ್ಲಿಂದು ಗೋವಾ ಅರಣ್ಯ ಸಚಿವರ ನಿಯೋಗದೊಂದಿಗೆ ನಡೆದ ಮಾತುಕತೆಯ ಬಳಿಕ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಈಶ್ವರ್ ಖಂಡ್ರೆ, ಅಭಿವೃದ್ಧಿ ಮತ್ತು ಮೂಲಸೌಕರ್ಯ ವಿಚಾರದಲ್ಲಿ ನೆರೆ ರಾಜ್ಯಗಳು ಪರಸ್ಪರ ಔದಾರ್ಯದಿಂದ ಇರಬೇಕು ಎಂದು ಹೇಳಿದ್ದಾರೆ. ಗೋವಾದಲ್ಲಿ ಶೇಕಡಾ ೬೦ರಷ್ಟು ಅರಣ್ಯ ಪ್ರದೇಶವಿದ್ದರೂ ಆನೆ ಸಮಸ್ಯೆ ಇರಲಿಲ್ಲ. ಈಗ ಓಂಕಾರ ಎಂಬ ಪುಂಡಾನೆಯೊಂದು ಉಪಟಳ ನೀಡುತ್ತಿದ್ದು, ಬೆಳೆ ಹಾನಿ ಆಗುತ್ತಿದೆ. ಹೀಗಾಗಿ ಆನೆ ಸೆರೆಗೆ ತರಬೇತಿ ಪಡೆದ

ಕುಮ್ಕಿ ಆನೆಗಳು ಹಾಗೂ ತಜ್ಞರನ್ನು ಕಳುಹಿಸಿ ಸಹಕಾರ ನೀಡುವಂತೆ ಗೋವಾ ಸರ್ಕಾರ ಮನವಿ ಮಾಡಿದೆ ಎಂದು ತಿಳಿಸಿದ್ದಾರೆ. ಗೋವಾ ಅರಣ್ಯ ಸಚಿವ ವಿಶ್ವಜಿತ್ ರಾಣೆ ಮಾತನಾಡಿ, ಪುಂಡಾನೆ ಸೆರೆಗೆ ಸಹಕಾರ ನೀಡುವ ಭರವಸೆ ನೀಡಿರುವ ರಾಜ್ಯ ಸರ್ಕಾರ ಮತ್ತು ಈಶ್ವರ ಖಂಡ್ರೆ ಅವರಿಗೆ ಧನ್ಯವಾದ ಅರ್ಪಿಸಿದ್ದಾರೆ.

<><><><>

ಪ್ರತಿ ವರ್ಷ ನಾಡಹಬ್ಬ ದಸರಾ ಸಂದರ್ಭದಲ್ಲಿ ಮೈಸೂರಿನ ಅರಮನೆಯ ಮುಂಭಾಗದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನೀಡಲಾಗುವ ಪ್ರತಿಷ್ಠಿತ ಸಂಗೀತ ವಿದ್ವಾನ್ ಪ್ರಶಸ್ತಿಗೆ ಪಂಡಿತ್ ಕೆ ವೆಂಕಟೇಶ್ ಕುಮಾರ್ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ತಿಳಿಸಿದ್ದಾರೆ. ಸೆಪ್ಟೆಂಬರ್ ೨೨ರಂದು ಮೈಸೂರಿನ ಅರಮನೆಯ ಮುಂಭಾಗದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಡಾ. ವೈ ಕೆ ಮುದ್ದುಕೃಷ್ಣ ಅವರ ಆಯ್ಕೆ ಸಲಹಾ ಸಮಿತಿ ಪಂ. ವೆಂಕಟೇಶ್ ಕುಮಾರ್ ಅವರನ್ನು ಆಯ್ಕೆ ಮಾಡಿದೆ. ಈ ಪ್ರಶಸ್ತಿಯು ಐದು ಲಕ್ಷ ರೂಪಾಯಿ ನಗದು, ಸ್ಮರಣಿಕೆ ಹಾಗೂ ಪ್ರಶಸ್ತಿ ಪತ್ರ, ಒಳಗೊಂಡಿದೆ.

<><><><>

ಬೆಂಗಳೂರಿನ ಕೆ.ಆರ್ ಮಾರುಕಟ್ಟೆಯಲ್ಲಿ ಸ್ವಚ್ಛತೆ ಕಾಪಾಡಲು ಮಾಸ್ಟರ್ ಪ್ಲಾನ್ ತಯಾರಿಸುವಂತೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕೆ.ಆರ್. ಮಾರುಕಟ್ಟೆಗೆ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ಕೆ.ಆರ್ ಮಾರುಕಟ್ಟೆಯಲ್ಲಿ ಪ್ರತಿನಿತ್ಯ ಸುಮಾರು ೭೦ ಟನ್ ತ್ಯಾಜ್ಯ ಉತ್ಪತ್ತಿ ಆಗುತ್ತಿದ್ದು, ಅದನ್ನು ಪರಿಣಾಮಕಾರಿ ಹಾಗೂ ವೈಜ್ಞಾನಿಕವಾಗಿ ವಿಲೇವಾರಿ ಮಾಡುವಂತೆ ಸೂಚಿಸಿದ್ದಾರೆ.

<><><><>

ಕೌಟುಂಬಿಕ ಮೌಲ್ಯ ವಿಭಾಗದಲ್ಲಿ ಅತ್ಯುತ್ತಮ ಕಲಾತ್ಮಕ ಚಿತ್ರ, ರಾಷ್ಟ್ರೀಯ ಪ್ರಶಸ್ತಿ ಪಡೆದ, 'ಚಲೋ ಜೀತೆ ಹೈ" ಚಲನಚಿತ್ರವನ್ನು ಬೆಂಗಳೂರಿನ ಜಾಲಹಳ್ಳಿಯ ಪಿಎಂ ಶ್ರೀ ಕೇಂದ್ರೀಯ ವಿದ್ಯಾಲಯ ನಂ. ೧ ಶಾಲೆಯಲ್ಲಿ ಪ್ರದರ್ಶಿಸಲಾಗಿದೆ. ೧ ರಿಂದ ೧೨ನೇ ತರಗತಿಯ ಅಂದಾಜು ೧೫೦೦ ವಿದ್ಯಾರ್ಥಿಗಳು ಪ್ರದರ್ಶನ ವೀಕ್ಷಿಸಿದ್ದಾರೆ. ಇದು ಸಾಮಾಜಿ ಕಳಕಳಿಯುಳ್ಳ ಚಲನಚಿತ್ರ ಎಂದು ಶಾಲೆಯ ಪ್ರಾಂಶುಪಾಲರಾದ ರವೀಂದ್ರ ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ- ರವೀಂದ್ರ ಪ್ರಾಂಶುಪಾಲರು (೨೩ ಸೆಕೆಂಡ್‌ಗಳು)

ಚಲೋ ಜೀತೆ ಹೇ ಚಲನಚಿತ್ರ ಒಂದು ಪ್ರೇರಣಾದಾಯಕ ಚಿತ್ರವಾಗಿದೆ ಎಂದು ಬಿಜೆಪಿ ಕೋಲಾರ ಜಿಲ್ಲಾಧ್ಯಕ್ಷ ಓಂಶಕ್ತಿ ಚಲಪತಿ ಹೇಳಿದ್ದಾರೆ.

ಧ್ವನಿ- ಬಿಜೆಪಿ ಜಿಲ್ಲಾಧ್ಯಕ್ಷ ಓಂಶಕ್ತಿ ಚಲಪತಿ

<><><><>

ವಿಜಯಪುರ ನಗರದಲ್ಲಿ ಮಳೆಯಿಂದ ಪದೇ ಪದೇ ಪ್ರವಾಹದಂತಹ ಪರಿಸ್ಥಿತಿ ಎದುರಾಗುತ್ತಿದ್ದು ಶಾಶ್ವತ ಪರಿಹಾರಕ್ಕಾಗಿ ಸೂಕ್ತ ಕಾಮಗಾರಿಗಳನ್ನು ಕೈಗೊಂಡು ಅನುಷ್ಠಾನಗೊಳಿಸುವಂತೆ ಪಾಲಿಕೆ ಅಧಿಕಾರಿಗಳಿಗೆ ಬೃಹತ್

ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಖಾತೆ ಸಚಿವ ಎಂ.ಬಿ.ಪಾಟೀಲ್ ಸೂಚನೆ ನೀಡಿದ್ದಾರೆ. ವಿಜಯಪುರದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಪ್ರತಿ ಬಾರಿಯೂ ಮಳೆ ಬಂದಾಗ ನಗರದ ವಿವಿಧ ತಗ್ಗು ಪ್ರದೇಶಗಳಲ್ಲಿ ನೀರು ನಿಂತು ತೊಂದರೆಯಾಗುತ್ತಿದೆ. ಸಮಸ್ಯೆ ಮರುಕಳಿಸದಂತೆ ಶಾಶ್ವತವಾಗಿ ಸಮಸ್ಯೆಗೆ ಪರಿಹಾರ ದೊರಕಿಸಲು ಸೂಕ್ತ ಕ್ರಿಯಾಯೋಜನೆಯನ್ನು ರೂಪಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಹಂಚಿನಾಳ ಕೆರೆ ೯.೫೦ ಕೋಟಿ ಅನುದಾನದಲ್ಲಿ ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ಕಾಮಗಾರಿ ಅನುಷ್ಠಾನಗೊಳಿಸಬೇಕು. ಕೆರೆಯ ಹೂಳು ತೆಗೆಯುವುದು ಸೇರಿದಂತೆ ಒಟ್ಟಾರೆ ಗುಣಮಟ್ಟದಿಂದ ಕೂಡಿದ ಕಾಮಗಾರಿಯನ್ನು ಕೈಗೊಳ್ಳಬೇಕು ಎಂದು ಹೇಳಿದ್ದಾರೆ. ಪಾಲಿಕೆ ಹಾಗೂ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಅತಿಕ್ರಮಣಗೊಂಡ ಉದ್ಯಾನವನಗಳನ್ನು ನಿರ್ದಾಕ್ಷಿಣ್ಯವಾಗಿ ತೆರವುಗೊಳಿಸುವಂತೆ ನಿರ್ದೇಶನ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>